# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **43** |
| ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15-07-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಜನತೆಗೆ ಇಂಧನ ಇಲಾಖೆಯಿಂದ ಗೃಹ ಜ್ಯೋತಿ ಯೋಜನೆಯಡಿಯಲ್ಲಿ 200 ಯೂನಿಟ್ ಉಚಿತವಾಗಿ ಪೂರೈಸಲು ಸರ್ಕಾರದ ಬೊಕ್ಕಸಕ್ಕೆ ಉಂಟಾಗಬಹುದಾದ ವಾರ್ಷಿಕ ಹೊರೆ ಎಷ್ಟು; | ಗುಲ್ಬರ್ಗ ವಿದ್ಯುತ್ ವಿತರಣಾ ಕಂಪನಿ ವ್ಯಾಪ್ತಿಯ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಜನತೆಗೆ ಇಂಧನ ಇಲಾಖೆಯಿಂದ ಗೃಹ ಜ್ಯೋತಿ ಯೋಜನೆಯಡಿಯಲ್ಲಿ 200 ಯೂನಿಟ್ ವಿದ್ಯುತ್ ಉಚಿತವಾಗಿ ಪೂರೈಸಲು ತಗುಲಿದ ವಾರ್ಷಿಕ ವೆಚ್ಚದ ವಿವರಗಳು ಕೆಳಕಂಡಂತಿವೆ: <table><tr><th>ವಾರ್ಷಿಕ ವರ್ಷ</th><th>ಕಲಬುರಗಿ ಜಿಲ್ಲೆ</th><th>ಯಾದಗಿರಿ ಜಿಲ್ಲೆ</th></tr><tr><td>2023-24</td><td>171 ಕೋಟಿ</td><td>54 ಕೋಟಿ</td></tr><tr><td>2024-25 (ಜೂನ್-2024 ರ ವರೆಗೆ)</td><td>76 ಕೋಟಿ</td><td>25 ಕೋಟಿ</td></tr></table> |
| ಆ) | ಉಚಿತ 200 ಯೂನಿಟ್ ವಿದ್ಯುತ್ ಸರಬರಾಜಿನಿಂದ ಉಂಟಾಗುವ ನಷ್ಟವನ್ನು ಸರಿದೂಗಿಸಲು ವಿದ್ಯುತ್ ಕಂಪನಿಗಳಿಗೆ ಸರ್ಕಾರದಿಂದ ಯಾವ ರೀತಿ ಪರಿಹಾರವನ್ನು ನೀಡಲಾಗುತ್ತಿದೆ? (ಸಂಪೂರ್ಣ ವಿವರ ನೀಡುವುದು) | ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಅರ್ಹ ಫಲಾನುಭವಿಗಳಿಗೆ ಮಾಸಿಕ 200 ಯೂನಿಟ್ ಗಳ ವರೆಗೆ ಉಚಿತ ವಿದ್ಯುತ್ ಸರಬರಾಜು ಮಾಡಲು ತಗಲುವ ವೆಚ್ಚವನ್ನು ಪ್ರತಿ ಮಾಹೆಯ ಬೇಡಿಕೆಗನುಸಾರವಾಗಿ ಸರ್ಕಾರವು ಸಹಾಯಧನದ ರೂಪದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಮುಂಗಡವಾಗಿ ನೀಡುತ್ತಿದೆ, |

ಸಂಖ್ಯೆ: ಎನರ್ಜಿ 169 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು